**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ನೇವಿ-1/ಅಉಆ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:19.02.2022.

**ಸುತ್ತೋಲೆ**

ವಿಷಯ: 2021-22ನೇ ಶೈಕ್ಷಣಿಕ ಸಾಲಿನಲ್ಲಿ ಅತಿಥಿ ಉಪನ್ಯಾಸಕರ ಆಯ್ಕೆ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ:ಇಡಿ/242/ಡಿಸಿಇ/2021, ದಿನಾಂಕ:14.01.2022.
2. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ನೇವಿ-1/ಅಉಆ/97/2021-22, ದಿನಾಂಕ:17.01.2022.

*****

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2021-22ನೇ ಶೈಕ್ಷಣಿಕ ಸಾಲಿನಲ್ಲಿ ಉಲ್ಲೇಖ-(1)ರ ಸರ್ಕಾರದ ಆದೇಶದಲ್ಲಿ ತಿಳಿಸಿರುವಂತೆ, ಗರಿಷ್ಠ 15/19 ಗಂಟೆಗಳ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಕ್ರಮವಹಿಸಲಾಗಿದ್ದು, ಅದರಂತೆ, ಉಲ್ಲೇಖ-(3) ರ ಈ ಕಛೇರಿಯ ಸುತ್ತೋಲೆಯಲ್ಲಿ ನಿರ್ದಿಷ್ಟಪಡಿಸಿರುವಂತೆ, ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿ, ಅಭ್ಯರ್ಥಿಗಳು ಅರ್ಜಿಯಲ್ಲಿ ಅತಿಥಿ ಉಪನ್ಯಾಸಕರಾಗಿ ಸಲ್ಲಿಸಿದ ಸೇವಾ ಅನುಭವ ಮತ್ತು ವಿದ್ಯಾರ್ಹತೆ ಸಂಬಂಧಿಸಿದಂತೆ ನೀಡಿರುವ ಮಾಹಿತಿ ಆಧರಿಸಿ, ಸಿದ್ಧಪಡಿಸಲಾಗಿದ್ದ ರಾಜ್ಯಮಟ್ಟದ ಆಯ್ಕೆಪಟ್ಟಿಯನ್ವಯ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಅವರು ಆಯ್ಕೆ ಮಾಡಿಕೊಂಡಿರುವ ಕಾಲೇಜುಗಳಲ್ಲಿ ಈಗಾಗಲೇ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

ಈಗಾಗಲೇ ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕಾರ್ಯ ನಿರ್ವಹಿಸುತ್ತಿರುವ ಹಲವು ಅತಿಥಿ ಉಪನ್ಯಾಸಕರು ವಿವಿಧ ಕಾರಣಗಳನ್ನು ನೀಡಿ, ಸ್ಥಳ/ಕಾಲೇಜನ್ನು ಬದಲಾವಣೆ ಮಾಡಿಕೊಡುವಂತೆ, ಕೋರಿ ಮನವಿಗಳನ್ನು ಸಲ್ಲಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಕಾಲೇಜು ಬದಲಾವಣೆ ಕೋರಿರುವ ಅಭ್ಯರ್ಥಿಗಳು ಹಾಗೂ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಈ ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸುವಂತೆ ಸೂಚಿಸಲಾಗಿದೆ.

1) ಕಾಲೇಜು ಬದಲಾವಣೆ ಬಯಸುವ ಅಭ್ಯರ್ಥಿಗಳು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಅರ್ಜಿಯನ್ನು ದಿನಾಂಕ:21.02.2022ರ ಸಂಜೆ 4:00 ಗಂಟೆ ಒಳಗಾಗಿ ಸಲ್ಲಿಸುವುದು.

2) ಈ ರೀತಿಯಲ್ಲಿ ಸ್ವೀಕೃತವಾದ ಅರ್ಜಿಗಳನ್ನು ಪ್ರಾಂಶುಪಾಲರು ಅಂತಹ ಅತಿಥಿ ಉಪನ್ಯಾಸಕರನ್ನು ಇ.ಎಂ.ಐ.ಎಸ್.ನಲ್ಲಿ **ರಿಜೆಕ್ಟ್** ಎಂದು ನಮೂದಿಸಿ, "**Forgo Present College**" ಕಾರಣವನ್ನು ಆಯ್ಕೆ ಮಾಡಿ ಅಪ್‌ಲೋಡ್

ಮಾಡುವುದು ಹಾಗೂ ಅತಿಥಿ ಉಪನ್ಯಾಸಕರ ಕರ್ತವ್ಯದಿಂದ ಬಿಡುಗಡೆಗೊಳಿಸುವುದು.

3) ಕಾಲೇಜು ಬದಲಾವಣೆ ಕೋರಿ ಪ್ರಾಂಶುಪಾಲರಿಗೆ ಅರ್ಜಿ ಸಲ್ಲಿಸಿ, ಕಾಲೇಜನ್ನು **Forgo** ಮಾಡಿಕೊಂಡ ಅತಿಥಿ ಉಪನ್ಯಾಸಕರನ್ನು ಆ ಕಾಲೇಜಿನ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುತ್ತದೆ ಹಾಗೂ ಸದರಿ ಕಾರ್ಯಭಾರವನ್ನು ಮುಂದಿನ ಸುತ್ತಿನ ಕೌನ್ಸಿಲಿಂಗ್‌ಗೆ ಸೇರಿಸಲಾಗುವುದು. ತದನಂತರ ಯಾವುದೇ ಕಾರಣಕ್ಕೂ ಪುನಃ ಅದೇ ಕಾಲೇಜನ್ನು ಉಳಿಸಿಕೊಳ್ಳಲು ಸಾಧ್ಯವಾಗುವುದಿಲ್ಲ.

4) ಮೊದಲನೇ ಸುತ್ತಿನ ಕೌನ್ಸಿಲಿಂಗ್‌ನಲ್ಲಿ ಕಾಲೇಜನ್ನು ಆಯ್ಕೆ ಮಾಡಿಕೊಂಡು ಆ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಕಾರ್ಯಭಾರ ಕೊರತೆ/ಇಲ್ಲದೆ ಹೊರಗುಳಿದಿರುವ ಅಭ್ಯರ್ಥಿಗಳು, ವಿವಿಧ ಕಾರಣಗಳಿಂದ ಕಾಲೇಜು ಬದಲಾವಣೆ ಬಯಸಿರುವ ಅತಿಥಿ ಉಪನ್ಯಾಸಕರು ಹಾಗೂ ಈಗಾಗಲೇ ಮೊದಲನೇ ಸುತ್ತಿನ ಕೌನ್ಸಿಲಿಂಗ್ ನಂತರ ಇನ್ನೂ ಬಾಕಿ ಇರುವ (Waiting List) ಅಭ್ಯರ್ಥಿಗಳು ಸೇರಿದಂತೆ ಒಟ್ಟಾರೆ ಒಂದು ಕ್ರೋಢೀಕೃತ ಆಯ್ಕೆಪಟ್ಟಿಯನ್ನು (Combined Selection List) ಸಿದ್ಧಪಡಿಸಲಾಗುವುದು.

5) ಈಗಾಗಲೇ ಬಾಕಿ ಇರುವ ಕಾರ್ಯಭಾರ ಮತ್ತು ಕಾಲೇಜು Forgo ಮಾಡಿಕೊಂಡ ಅತಿಥಿ ಉಪನ್ಯಾಸಕರ ಕಾರ್ಯಭಾರವನ್ನು ಕ್ರೋಢೀಕರಿಸಿ ಶೀಘ್ರದಲ್ಲೇ ನಡೆಯಲಿರುವ ಎರಡನೇ ಹಂತದ ಕೌನ್ಸಲಿಂಗ್ ಪ್ರಕ್ರಿಯೆಯಲ್ಲಿ ಸೇರಿಸಿ, ಒಟ್ಟಾರೆ ಲಭ್ಯವಾಗುವ ಕಾರ್ಯಭಾರದ ಆಧಾರದ ಮೇಲೆ ಕಾಲೇಜು/ಸ್ಥಳ ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು.

**ನಿರ್ದೇಶಕರು**
**ಕಾಲೇಜು ಶಿಕ್ಷಣ ಇಲಾಖೆ**

**<u>ಇವರಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:</u>**

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ಅಧಿಕಾರಿಗಳು, ಮಾಹಿತಿ-ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು.
4. ಮ್ಯಾನೇಜರ್/ಅಧೀಕ್ಷಕರು, ಯೋಜನೆ ಮತ್ತು ಆಯವ್ಯಯ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು.
5. ಕಛೇರಿ ಪ್ರತಿ.

**ಇಂದ:** **ದಿನಾಂಕ:**

------------------

ಅತಿಥಿ ಉಪನ್ಯಾಸಕರು

---------------------------------- ಕಾಲೇಜು

--------------------------------------

ID No: ………………………………………………………..

Subject: ……………………………………………………..

Mobile No.: ……………………………………………

**ಇವರಿಗೆ:**

ಪ್ರಾಂಶುಪಾಲರು

---------------------------------- ಕಾಲೇಜು

--------------------------------------

ಮಾನ್ಯರೆ,

ವಿಷಯ: ಅತಿಥಿ ಉಪನ್ಯಾಸಕರಾಗಿ ಬೇರೆ ಕಾಲೇಜನ್ನು ಎರಡನೇ ಸುತ್ತಿನ ಕೌನ್ಸಿಲಿಂಗ್ ನಲ್ಲಿ ಆಯ್ಕೆ ಮಾಡಿಕೊಳ್ಳುವುದರ ಬಗ್ಗೆ

ನಾನು ದಿನಾಂಕ: ------------------ ರಂದು ನಡೆದ ಮೊದಲ ಸುತ್ತಿನ ಆನ್ ಲೈನ್ ಕೌನ್ಸಿಲಿಂಗ್ ನಲ್ಲಿ ಭಾಗವಹಿಸಿ --------------- -------------------------------------- ಕಾಲೇಜನ್ನು ಆಯ್ಕೆ ಮಾಡಿಕೊಂಡು ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆ. ನಾನು ಸದ್ಯಕ್ಕೆ ಆಯ್ಕೆ ಮಾಡಿಕೊಂಡಿರುವ ಕಾಲೇಜನ್ನು ಬಿಟ್ಟುಕೊಡುತ್ತಾ (forgo) ಈ ಕಾಲೇಜಿನಿಂದ ನನ್ನನ್ನು ಬಿಡುಗಡೆಗೊಳಿಸಿ ಎರಡನೇ ಸುತ್ತಿನ ಕೌನ್ಸಿಲಿಂಗ್ ನಲ್ಲಿ ಪಾಲ್ಗೊಳ್ಳಲು ಅವಕಾಶ ಮಾಡಿಕೊಡಬೇಕೆಂದು ಕೋರಿಕೊಳ್ಳುತ್ತೇನೆ.

ಎರಡನೇ ಸುತ್ತಿನ ಕೌನ್ಸಿಲಿಂಗ್ ನಲ್ಲಿ ಮೆರಿಟ್ ಆಧಾರದಲ್ಲಿ ಅರ್ಹತೆ ಇದ್ದಲ್ಲಿ ಮಾತ್ರ ನನಗೆ ಕೌನ್ಸಿಲಿಂಗ್ ಅವಕಾಶ ಸಿಗುವುದು ಎಂದು ನನಗೆ ತಿಳಿದಿರುತ್ತದೆ. ಮುಂದುವರೆಯುತ್ತಾ ಈ ಕಾಲೇಜಿನಿಂದ ಬಿಡುಗಡೆಗೊಂಡು ಎರಡನೇ ಸುತ್ತಿನ ಕೌನ್ಸಿಲಿಂಗ್ ನಲ್ಲಿ ಪಾಲ್ಗೊಳ್ಳುವುದರಿಂದ ಈಗ ಕಾರ್ಯ ನಿರ್ವಹಿಸುತ್ತಿರುವ ಕಾಲೇಜಿನಲ್ಲಿ ನಾನು ಕಾರ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರ ಕಾರ್ಯಭಾರ/ ಖಾಲಿಹುದ್ದೆಯನ್ನು ಎರಡನೇ ಸುತ್ತಿನ ಕೌನ್ಸಿಲಿಂಗ್ ನಲ್ಲಿ ಆಯ್ಕೆ ಮಾಡಿಕೊಳ್ಳಲು ಮೆರಿಟ್ ಆಧಾರದ ಮೇಲೆ ಇತರರಿಗೂ ಅವಕಾಶ ಇರುತ್ತದೆ ಹಾಗೂ ಸದರಿ ಕಾರ್ಯಭಾರ/ ಖಾಲಿಹುದ್ದೆ ನನಗೆ ಮೀಸಲಿರುವುದಿಲ್ಲ ಎಂಬ ಅರಿವು ನನಗೆ ಇರುತ್ತದೆ.

(ಅತಿಥಿ ಉಪನ್ಯಾಸಕರ ಹೆಸರು ಮತ್ತು ಸಹಿ)